## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1594
ಸದಸ್ಯರ ಹೆಸರು : ಶ್ರೀ ಶಶೀಲ್ ನಮೋಶಿ
ಉತ್ತರಿಸುವ ದಿನಾಂಕ : 11-03-2022
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕೆ.ಆರ್.ಇ.ಐ.ಎಸ್ ಖಾಯಂ ನೌಕರರು ಮರಣ ಹೊಂದಿದ ಕುಟುಂಬಗಳಿಗೆ ಮರಣ ಮತ್ತು ನಿವೃತ್ತಿ ಉಪದಾನ ಸೌಲಭ್ಯವನ್ನು ನೀಡಲಾಗಿದೆಯೇ; | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ 826 ವಸತಿ ಶಾಲೆ/ಕಾಲೇಜುಗಳು (ಪರಿಶಿಷ್ಟ ಜಾತಿ-503, ಪರಿಶಿಷ್ಟ ವರ್ಗ-156, ಹಿಂದುಳಿದವರ್ಗ-167) ಕಾರ್ಯನಿರ್ವಹಿಸುತ್ತಿವೆ.<br><br>ಸದರಿ ವಸತಿ ಶಾಲೆ/ ಕಾಲೇಜುಗಳಲ್ಲಿ ಒಟ್ಟು 18,988 ಬೋಧಕ/ ಬೋಧಕೇತರ ಹುದ್ದೆಗಳು ಮಂಜೂರಾಗಿದ್ದು, ಈ ಪೈಕಿ 5,801 ಖಾಯಂ ಬೋಧಕ /ಬೋಧಕೇತರ ಸಿಬ್ಬಂಧಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಇಲ್ಲಿಯವರೆಗೆ ಒಟ್ಟು 56 ಸಿಬ್ಬಂದಿಗಳು ನಿಧನ ಹೊಂದಿರುತ್ತಾರೆ.<br><br>ಸರ್ಕಾರಿ ಆದೇಶ ಸಂಖ್ಯೆ ಆಇ 03 ಸೇನಿಸೇ 2010, ದಿನಾಂಕ 12.10.2010 ಹಾಗೂ ಸಂಘದ 71ನೇ ಆಡಳಿತ ಮಂಡಳಿಯ ತೀರ್ಮಾನದಂತೆ ಸಂಘದ ಖಾಯಂ ಸಿಬ್ಬಂದಿ ಸೇವೆಯಲ್ಲಿರುವಾಗಲೇ ಮೃತರಾದ ಸಂದರ್ಭದಲ್ಲಿ ಅವರ ಕುಟುಂಬಗಳಿಗೆ ಇಡಿಗಂಟಿನ ಪರಿಹಾರವನ್ನು ನೀಡಲು ಅವಕಾಶವನ್ನು ಕಲ್ಪಿಸಲಾಗಿರುತ್ತದೆ.<br><br>ಅದರಂತೆ ದಿನಾಂಕ: 01.04.2018 ವರೆಗೆ ವಸತಿ ಶಾಲೆಗಳಲ್ಲಿ ಮರಣ ಹೊಂದಿದ 15 ಸಿಬ್ಬಂದಿಗಳಿಗೆ ಇಡಿಗಂಟಿನ ಸೌಲಭ್ಯವನ್ನು ನೀಡಲಾಗಿರುತ್ತದೆ.<br><br>ಸರ್ಕಾರದ ಆದೇಶ ಸಂಖ್ಯೆ ಆಇ 34 ಪಿಇಎನ್ 2018, ದಿನಾಂಕ: 23.06.2018 ರಲ್ಲಿ ರನ್ವಯ ಇಡಿಗಂಟಿನ ಸೌಲಭ್ಯವನ್ನು ದಿನಾಂಕ: 01.04.2018 ರಿಂದ ಅನ್ವಯಿಸಿ ಹಿಂಪಡೆಯಲಾಗಿದೆ.<br><br>ಸರ್ಕಾರದ ಆದೇಶ ಸಂಖ್ಯೆ ಆಇ 34 ಪಿಇಎನ್ 2018, ದಿನಾಂಕ:23.06.2018 ರ ಸರ್ಕಾರದ ಆದೇಶದ ನೂತನ ಪಿಂಚಣಿ ಯೋಜನೆಗೆ ಒಳಪಡುವ ಸರ್ಕಾರಿ ನೌಕರರಿಗೆ ಎಂದು ಸ್ಪಷ್ಟವಾಗಿ ತಿಳಿಸಿರುವುದರಿಂದ ಸದರಿ ಸೌಲಭ್ಯವು ಸರ್ಕಾರದ ನಿಗಮ ಮಂಡಳಿಗಳು, |
| ಆ) | ಹಾಗಿದ್ದಲ್ಲಿ, ಎಷ್ಟು ಜನ ನೌಕರರಿಗೆ ಈ ಸೌಲಭ್ಯ ನೀಡಲಾಗಿದೆ; | |
| ಇ) | ಸರ್ಕಾರದ ವಿಳಂಬ ನೀತಿಯಿಂದ ಮೃತ ಕುಟುಂಬಗಳು ಸದರಿ ಸೌಲಭ್ಯದಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | |
| ಈ) | ಹಲವಾರು ವರ್ಷಗಳಿಂದ ಜಾರಿಯಾಗದೇ ಇರುವ ಮರಣ ಮತ್ತು ನಿವೃತ್ತಿ ಉಪದಾನವನ್ನು ಸೌಲಭ್ಯವನ್ನು ಯಾವ ಕಾಲಮಿತಿಯಲ್ಲಿ ಜಾರಿಗೊಳಿಸಲಾಗುವುದು? (ಮಾಹಿತಿ ಒದಗಿಸುವುದು) | |

| | | |
|---|---|---|
| | | ಸ್ವಾಯುತ್ತ ಸಂಸ್ಥೆಗಳು, ಹಾಗೂ ಸರ್ಕಾರದ ಅಧೀನದ ಇನ್ನಿತರ ಯಾವುದೇ ಸಂಘ ಸಂಸ್ಥೆಗಳ ನೌಕರರಿಗೆ ಅನ್ವಯವಾಗುವುದಿಲ್ಲ. ಆದ್ದರಿಂದ ಸಂಘದ ನೌಕರರಿಗೆ ನಿವೃತ್ತಿ ಮತ್ತು ಮರಣ ಉಪದಾನ ಹಾಗೂ ಕುಟುಂಬ ಪಿಂಚಣಿ ಸೌಲಭ್ಯ ವಿಸ್ತರಿಸಲು ಸಾಧ್ಯವಿಲ್ಲವೆಂದು ತಿಳಿಸಲಾಗಿರುತ್ತದೆ.<br><br>ಆದಾಗ್ಯೂ ಸಹ ಸಂಘದ ಖಾಯಂ ನೌಕರರ ಹಿತದೃಷ್ಟಿಯಿಂದ ದಿ:01.08.2016 ರಿಂದ ಅನ್ವಯವಾಗುವಂತೆ ವಾರ್ಷಿಕ ಗುಂಪು ವಿಮೆ ಸೌಲಭ್ಯವನ್ನು ಕಲ್ಪಿಸಲಾಗಿದ್ದು, ಈವರೆಗೆ ಅರ್ಹರಿರುವ 35 ಮೃತರ ಕುಟುಂಬಕ್ಕೆ ಈ ಸೌಲಭ್ಯ ನೀಡಲಾಗಿರುತ್ತದೆ.<br><br>ಮುಂದುವರೆದು, ಸಂಘದ ನೌಕರರಿಗೆ ನಿವೃತ್ತಿ/ಮರಣ ಉಪದಾನ ಹಾಗೂ ಕುಟುಂಬ ಪಿಂಚಣಿ ಸೌಲಭ್ಯವನ್ನು ವಿಸ್ತರಿಸುವಂತೆ ಹೆಚ್ಚುವರಿ ಮಾಹಿತಿಯೊಂದಿಗೆ ಆರ್ಥಿಕ ಇಲಾಖೆಗೆ ಮತ್ತೊಮ್ಮೆ ಪ್ರಸ್ತಾವನೆಯನ್ನು ಸಲ್ಲಿಸಲು ಕ್ರಮವಹಿಸಲಾಗುತ್ತಿದೆ. |

ಸಕಇ 153 ಮೊದೇಶಾ 2022

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು